ಮೈಸೂರ ಗೆಜೆಟ್

ಸರ್ಕಾರದಿಂದ ಪಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಆಗಸ್ಟ್ ತಾ|| 31, ಸ್ರ್ 1889.

ಈ ಭಾಗವನ್ನು ವ್ಯತ್ಯೇಕ ಕೀರಸಿ ಇಡುವ ಬಗ್ಯೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಡ್ಯಗವರ್ನಮೆಂಟ್, ರಿಸಿಡೆಂಟರು, ಚೀಫ್ ಜಡ್ಜ್ಗಿರು, ವಗ್ಯೆರೇರಿಂದ ಕೊಡೋಣಾದ ಆಸ್ತಿಹಾರ್ನಾಮೆಗಳು.

ಫೈನಾಷಿಯಲ್ ಇಲಾಖಾ.

1882ನೇ ಇಸವಿಯ ಮೈಸೂರು ರೆಯಿಲ್ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡ್ರನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಯೆ, ಷರಾ ಬರೆಯಲ್ಪಡಬಹುದುಂಥಾ ಸದರೀ ಸಾಲದ ಡಿಬೆಂಚರ್ಗಳ ಮೇಲೆ ಲಂಡ್ರನಲ್ಲಿ, ಸ್ಟ್ಯಾಂಡ್ ಬೀವಿ 59ನೇ ನಂಬರ್ ಕಟ್ಟಣದಲ್ಲಿರುವ ಬ್ಯಾಂಕರ್ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್ಕೋಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಯೆ ಅವರುಗಳೊಡನೆ ಮೈಸೂರು ಗವರ್ನಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡ್ರನಲ್ಲಿ ತಮ್ಮ ಡಿಬೆಂಚರ್ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟ ಪಡುವ ಜನಗಳು ತಮ್ಮ ಡಿಬೆಂಚರ್ಗಳನ್ನು ಎಫ್ಫೇಸ್ಮೆಂಟ್ ಯಾನೇ ಷರಾ ಬಗ್ಯೆ ಇದರಡಿ ರುಜಾ ಮಾಡಿರುವವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡಿಯು, ಮದ್ರಾಸಿನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಲಿಕೇಟಾದ ಡಿಮಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಫ್ಫೇಸ್ಮೆಂಟ್ ಬಗ್ಯೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಜಡ್ಸನ್,
ಕಾಂಪ್ಟ್ರೋಲರ್.

ಬೆಂಗಳೂರು ಡಿಸ್ಟ್ರಿಕ್ಟ್.

ಬೆಂಗಳೂರು ಸಬ್ ಜಡ್ಜ್ಯಿಯವರಕೋರ್ಟ್ನಲ್ಲಿ.

1889ನೇ ಇಸವಿ ಅರ್ಜ್ಜೀ ನಂಬರ್ 680.

ಬೆಂಗಳೂರು ರಾಜಾಪಿಂಗನಪೇಟೇಲಿದ್ದು ಮೃತಪಟ್ಟ ಜಿಗಣಿ ಮುದ್ದಣ್ಣನ ಹೆಂಡತಿ ತಿಮ್ಮಕ್ಕನ ಆಸ್ತಿ ವಿಷಯದಲ್ಲಿ—

ಅರ್ಜಿದಾರ ವೀರಭದ್ರಪ್ಪ, ಮೃತಪಟ್ಟ ಸದರೀ ತಿಮ್ಮಕ್ಕನಿಗೆ ಮಗಳಮಗನು ಆಗಬೇಕೆಂಬ ಹಕ್ಕುದಾರಿ ಮೇಲೆ ಬೆಂಗಳೂರು ಸ್ಥಳದ ವೀರಭದ್ರಪ್ಪನು, ಬೆಂಗಳೂರು ವಾಸಸ್ಥರಾಗಿ ಮೃತಪಟ್ಟ ತಿಮ್ಮಕ್ಕನ ಜಿಂದಗಿ ಖರ್ಚಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವವಕ್ಕೆ 1860ನೇ ಇಸವಿ 27ನೇ ಆಕ್ಟ್ಯ ವೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಪಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ವೀರಭದ್ರಪ್ಪನ ಅರ್ಜಿಯನ್ನು 1889ನೇ ಇಸವಿ ಸೆಪ್ಟಂಬರ್ ತಿಂಗಳು ತಾರೀಖು 27ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ತಿಮ್ಮಕ್ಕನ ಆಸ್ತಿಗೆ ಹಕ್ಕು ದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1889ನೇ ಇಸವಿ ಅರ್ಜಿ ನಂಬರ್ 681.

ಬೆಂಗಳೂರಲ್ಲಿ ಇದ್ದು ಮೃತಪಟ್ಟ ಚಿಕ್ಕ ಸಂಜನ್ನಪ್ಪನ ಮಗ ಚಿಕ್ಕ ಮುನಿಯಪ್ಪನ ಆಸ್ತಿ ವಿಷಯದಲ್ಲಿ—

ಅರ್ಜಿದಾರ ನಂಜನ್ನಯ್ಯನವರ ಮಗ ನಂಜುಂಡಪ್ಪ, ಮೃತಪಟ್ಟ ಸದರೀ ಚಿಕ್ಕ ಮುನಿಯಪ್ಪನಿಗೆ ದೊಡ್ಡ ತಂದೆ ಮಗ ಆಗಬೇಕಂ ಬ ಹಕ್ಕುದಾರಿ ಮೇಲೆ ಬೆಂಗಳೂರು ಸ್ಥಳದ ಸಂಜನ್ನಪ್ಪನವರ ಮಗ ನಂಜುಂಡಪ್ಪ, ಬೆಂಗಳೂರು ವಾಸಸ್ಥರಾಗಿ ಮೃತಪಟ್ಟ ಚಿಕ್ಕ ಮುನಿಯಪ್ಪನ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ನಂಜುಂಡಪ್ಪನ ಅರ್ಜಿಯನ್ನು 1889ನೇ ಇಸವಿ ಸೆಪ್ಟಂಬರ್ ತಿಂಗಳು ತಾರೀಖು 27ರಲ್ಲು. ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಚಿಕ್ಕ ಮುನಿಯಿಪ್ಪನ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1889ನೇ ಇಸವಿ ಅರ್ಜಿ ನಂಬರ್ 682.

ಬೆಂಗಳೂರಲ್ಲಿ ಇದ್ದು ಮೃತಪಟ್ಟ ಗುರುಬಸಪ್ಪನ ಆಸ್ತಿ ವಿಷಯದಲ್ಲಿ—

ಅರ್ಜಿದಾರ್ರು 1ನೇ ಲಿಂಗಮ್ಮ ವೈನರ್, ಗಾರ್ಡಿಯರ್ ಗಂಗಮ್ಮ 2ನೇ ಮಲ್ಲಯ್ಯ, ಮೃತಪಟ್ಟ ಸದರೀ ಗುರುಬಸಪ್ಪನಿಗೆ 1ನೇ ಅರ್ಜಿದಾರಳ ಗಾರ್ಡಿಯರ್ ಗಂಗಮ್ಮ ಹೆಂಡತಿ ಆಗಬೇಕೆಂಬ ಹಕ್ಕುದಾರಿ ಮೇಲೆ ಬೆಂಗಳೂರು ಸ್ಥಳದ 1ನೇ ಗಂಗಮ್ಮ, 2ನೇ ಮಲ್ಲಯ್ಯ ಸಹ ಬೆಂಗಳೂರು ವಾಸಸ್ಥರಾಗಿ ಮೃತಪಟ್ಟ ಗುರುಬಸಪ್ಪನ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಗಂಗಮ್ಮ, ಮಲ್ಲಯ್ಯನ ಅರ್ಜಿಯನ್ನು 1889ನೇ ಇಸವಿ ಸೆಪ್ಟಂಬರ್ ತಿಂಗಳು ತಾರೀಖು 27ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಗುರುಬಸಪ್ಪನ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1889ನೇ ಇಸವಿ ಆಗಸ್ಟ್ ತಿಂಗಳು 27ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಂ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ದಿವಾಳಿಯಾದ ಡಿಕ್ರಿ ದೇಣೇದಾರ ಕೋಲಾರ ಡಿಸ್ಟ್ರಿಕ್ಟ್ ಶ್ರೀನಿವಾಸಪುರವೆಂಬ ಪಾಳ್ಯ ಗ್ರಾಮದಲ್ಲಿ ಯಿರತಕ್ಕ ಸೊಂಣಕ್ಕನ ವಿಷಯದಲ್ಲಿ—

ಸಕ್ರ 1889ನೇ ಇಸವಿ ದಿವಾಳಿ ಕೇಸ್ ನಂಬರ್ 369.

ಹುಕುಂ.

ವೀಳ್ಯಂಡ ಸೊಂಣಕ್ಕನು ನಿರ್ಬಂಧನೆಯಿಂದ ಖುಲಾಸೆ ಯಾಗಬೇಕೆಂದು ಕೊಟ್ಟ ಅರ್ಜೀ ಅಂಕವು ಸಬ್ ಜಡ್ಜರಾದ ಮೆ|| ಅನಂತ ಸ್ವಾಮಿರಾಯರವರ ರೂಬರೂ ಅರ್ಜೀದಾರಳಾದ ಸೊಂಣಕ್ಕನ ಪರವಾಗಿ ಪ್ಲೀಡರ್ ಮೆ|| ಗಂಗಾಧರೈಯ್ಯನವರುನ್ನೂ ಮತ್ತು ಸದರೀ ಯವಳ ಲೇಣೇದ್ರಾರಾದ 2ನೇ ಪೈರರಡ್ಡಿಯನ್ನ ಖಬ್ದಗಿಯೂ ದರ್ಯಾಫ್ತೀ ಮಾಡಲ್ಪಟ್ಟಿತು.

ಈ ಕೆಳಗೆ ನಮೂದು ಮಾಡಲ್ಪಡುವ ಲೇಣೇದಾರ್ರು ತಮಗೆ ಈ ದರ್ಯಾಫ್ತೀ ನೋಟಿಸ್ ಜಾರಿಯಾಗಿದ್ದಾಗ್ಯೂ ಖುದ್ದಾಗಿಯಾಗಲಿ ಅಥವಾ ಲಾಯರ್ ಮೂಲಕವಾಗಿಯಾಗಲಿ ಹಾಜರಾಗುವದಕ್ಕೆ ತಪ್ಪಿ ಹೋದರು, ಯಾರಂದರೆ—1ನೇ ಬಳ್ಳಾರೀ ದೊಡ್ಡ ಸುಬ್ಬು.

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 20ನೇ ಅಧ್ಯಾಯದ ನಿರೂಪಣೆಗಳ ಫಲವನ್ನ ಸದರೀ ಸೊಂಣಕ್ಕ ಯಂಬುವಳು ಹೊಂದುವದಕ್ಕೆ ಹಕ್ಕುದಾರಳಾಗುವದರ ಮೂಲಕ ದಿವಾಳಿಯಾದವಳೆಂದು ತೀರ್ಮಾನಿಸಲ್ಪಟ್ಟಿರುತ್ತೆಯಾಗಿ ಸದರೀ ದಿವಾಳಿಯಾದವಳನ್ನ ನಿರ್ಬಂಧದಿಂದ ವಿಮೋಚನೆ ಮಾಡಿರುವದಲ್ಲದೆ ಇದಕ್ಕೆ ಲಗ್ನ ತ್ವಾಗಿರುವ ಪಟ್ಟಿಯಲ್ಲಿ ಕಂಡ ಯಾವ ಸಾಲಕ್ಕೊಳ್ಳಕ್ಕರವಾಗಿಯಾಗಲಿ ವಸ್ತಗಿರಿ ಮಾಡಲ್ಪಟ್ಟ ನಿರ್ಬಂಧಪಡುವ ಜವಾಬ್ದಾರಿಯಿಂದ ಸಹ ಅವಳನ್ನ ನಿಖಾಲಸ್ ಮಾಡಲಾಗಿರುತ್ತೆ ಯೆಂದು ಇದರಿಂದ ಹುಕುಂ ಮಾಡಲ್ಪಟ್ಟಿರುತ್ತೆ.

ಸಕ್ರ 1889ನೇ ಇಸವಿ ಜುಲೈ 26ನೇ ತಾರೀಖಿನಲ್ಲಿ ಈ ಕೋರ್ಟು ಮೊಹರಿನಿಂ ನಮ್ಮ ದಸ್ತಖತ್ತಿನಿಂ ಕೊಡಲ್ಪಟ್ಟಿತು.